# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ದಿನಾಂಕ:– 28–04–2022 ರಂದು ಬೆಳಗ್ಗೆ:– 11.30 ಗಂಟೆಗೆ ಶ್ರೀ. ಶ್ರೀ ಶಿವಕುಮಾರ ಸ್ವಾಮೀಜಿ ಸಾರ್ವಜನಿಕ ಸೇವಾ ಸಂಕೀರ್ಣ ವಾರ್ಡ್ ಸಂಖ್ಯೆ 126 ಮಾರುತಿಮಂದಿರದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.**

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ:ಬಿ12(5)/ಪಿ.ಆರ್/35/2020–21/21–09–2020ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ. ಜಯಶಂಕರ್ ರೆಡ್ಡಿ, ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಸೌಕರ್ಯ, ಮಹದೇವಪುರ ವಿಭಾಗ, ಬಿ.ಬಿ.ಎಂ.ಪಿ ರವರನ್ನು ನೇಮಿಸಲಾಗಿದ್ದು, ಸದರಿ ಆದೇಶದಂತೆ ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾದಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿಗಳು ಮತ್ತು ಸದಸ್ಯರು:–**

| ಕ್ರ. ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ನೋಡೆಲ್ ಅಧಿಕಾರಿ: ಶ್ರೀ. ಜಯಶಂಕರ್ ರೆಡ್ಡಿ, ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಸೌಕರ್ಯ, ಮಹದೇವಪುರ ವಿಭಾಗ, ಬಿ.ಬಿ.ಎಂ.ಪಿ. | 9741697632 |
| 2 | ಕಾರ್ಯದರ್ಶಿ ಮತ್ತು ಸಂಚಾಲಕರು<br>ಶ್ರೀ. ರವಿರಾಜ್ ಎಸ್. ಪಿ, ಸಹಾಯಕ ಅಭಿಯಂತರರು, ವಾರ್ಡ್ ನಂ.126 | 9980764000 |
| 3 | ಶ್ರೀ. ರಂಗದಾಮಯ್ಯ, ಕಾರ್ಯ ನಿರ್ವಾಹಕರು, ಮಾರುತಿಮಂದಿರ. | 9880376090 |
| 4 | ಶ್ರೀಮತಿ. ಮಾಲತಿ, ಆರೋಗ್ಯಾಧಿಕಾರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಮೂಡಲಪಾಳ್ಯ. | 9632112539 |
| 5 | ಶ್ರೀ. ರೇವತಿ. ಎಂ. – (RWA – Shivanandanagara)- ಸದಸ್ಯರು | 9741333900 |
| 6 | ಶ್ರೀ. ಶಿವಶಂಕರ್. ಎ. ಎಂ.– (RWA – Vinayaka Layout)- ಸದಸ್ಯರು | 9448055204 |
| 7 | ಶ್ರೀ. ಟಿ.ಎಲ್. ಪೈ– (RWA – Canarabank Colony)- ಸದಸ್ಯರು | 9741777170 |

*****

ದಿನಾಂಕ: 28–04–2022 ರಂದು ಬೆಳಿಗ್ಗೆ 11.30 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ಸದಸ್ಯರು ಮತ್ತು ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

## ಚರ್ಚಿಸಲಾದ ವಿಷಯಗಳ ವಿವರಗಳು:-

1. ಶ್ರೀ. ಟಿ.ಎಲ್. ಪೈ (RWA – Canarabank Colony) – ರವರು ಮಾತನಾಡುತ್ತಾ,
   - ವಿನಾಯಕ ದೇವಸ್ಥಾನದ ಪಕ್ಕದಲ್ಲಿರುವ ಟ್ರಾನ್ಸ್‌ಫಾರಂನಲ್ಲಿ ಶಬ್ಧ ಬರುತ್ತಿದ್ದು ಅಕ್ಕಪಕ್ಕದಲ್ಲಿರುವ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಬಗ್ಗೆ ಪ್ರಸ್ತಾಪಿಸಿದರು.
     **ಕ್ರಮ:** ಈ ಬಗ್ಗೆ ಮಾತನಾಡಿದ ವಾರ್ಡ್ ನೋಡಲ್ ಅಧಿಕಾರಿ ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಿ ಸದರಿ ದೂರನ್ನು ಬಗೆಹರಿಸಲು ಸೂಚಿಸಲಾಯಿತು. ಅದರಂತೆ ಬೆಸ್ಕಾಂ ಅಧಿಕಾರಿಗಳು ಸದರಿ ಸ್ಥಳಕ್ಕೆ ಭೇಟಿ ನೀಡಿ ಸದರಿ ದೂರನ್ನು ಬಗೆಹರಿಸಲಾಯಿತು.
   - ಕೆನರಾಬ್ಯಾಂಕ್ ಕಾಲೋನಿ ವ್ಯಾಪ್ತಿಯಲ್ಲಿ ಒಣಗಿದ ಮರಗಳ ಕೊಂಬೆಗಳನ್ನು ತೆರವುಗೊಳಿಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.
     **ಕ್ರಮ:** ಈ ಬಗ್ಗೆ ಮಾತನಾಡಿದ ವಾರ್ಡ್ ನೋಡಲ್ ಅಧಿಕಾರಿಗಳು ಅರಣ್ಯ ಅಧಿಕಾರಿಗಳಿಗೆ ತಿಳಿಸುವಂತೆ ಸೂಚಿಸಿದರು. ಅದರಂತೆ ಅರಣ್ಯ ಅಧಿಕಾರಿಗಳು ಈಗಾಗಲೇ ಕೆನರಾಬ್ಯಾಂಕ್ ಕಾಲೋನಿ ವ್ಯಾಪ್ತಿಯಲ್ಲಿ ಸುಮಾರು ಮರಗಳ ಕೊಂಬೆಗಳನ್ನು ಕೆಲವು ವಾರಗಳಿಂದ ತೆರವುಗೊಳಿಸುತ್ತಿದ್ದು, ಸದರಿ ದೂರನ್ನು ಬಗೆಹರಿಸಲಾಗಿದೆ ಎಂದು ತಿಳಿಸಿದರು.
2. ಶ್ರೀ. ಶಿವಶಂಕರ್ (RWA – Vinayaka Layout) – ರವರು ಮಾತನಾಡುತ್ತಾ,
   - ಕೋವಿಡ್–19 ಬೂಸ್ಟರ್ ಡೋಸ್ ನೀಡಲಾಗುತ್ತಿರುವ ಬಗ್ಗೆ ಮಾಹಿತಿ ಕೋರಿದರು.
     **ಕ್ರಮ:** ಸಭೆಯಲ್ಲಿ ಹಾಜರಿದ್ದ ಜಯರಾಜ್ ಪಿ.ಹೆಚ್.ಸಿ–ಮೂಡಲಪಾಳ್ಯ ರವರು ಮಾತನಾಡುತ್ತಾ 60 ವರ್ಷಗಳ ಮೆಲ್ಪಟ್ಟವರಿಗೆ ನೀಡುತ್ತಿರುವುದಾಗಿ ತಿಳಿಸಿದರು ಹಾಗೂ 12–14 ವರ್ಷದ ಮಕ್ಕಳಿಗೆ ಕೋವಿಡ್–19ರ ಲಸಿಕೆಯನ್ನು ಬುಧವಾರ ಮತ್ತು ಶನಿವಾರ ನೀಡಲಾಗುತ್ತಿರುವ ಬಗ್ಗೆ ಮಾಹಿತಿ ನೀಡಿದರು.
   - ವಿನಾಯಕ ಬಡಾವಣೆಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕದ ವಿದ್ಯುತ್ ಬಿಲ್ ಪಾವತಿಯನ್ನು ಬಿ.ಬಿ.ಎಂ.ಪಿ ವತಿಯಿಂದ ಪಾವತಿಸುವ ಬಗ್ಗೆ ಪ್ರಸ್ತಾಪಿಸಿದರು.
     **ಕ್ರಮ:** ಈ ಬಗ್ಗೆ ಮಾತನಾಡಿದ ವಾರ್ಡ್ ನೋಡಲ್ ಅಧಿಕಾರಿ ವಲಯ ಜಂಟಿ ಆಯುಕ್ತರಿಗೆ ಪ್ರಸ್ತಾವನೆ ಸಲ್ಲಿಸುವುದಾಗಿ ಸಭೆಗೆ ತಿಳಿಸಿದರು.
   - ಸಭೆಗೆ ಹಾಜರಿರದ ಅಧಿಕಾರಿಗಳ ವಿರುದ್ಧ ನೋಟೀಸ್ ಜಾರಿ ನೀಡಲು ಸಭೆಯಲ್ಲಿ ಚರ್ಚಿಸಲಾಯಿತು.

ಈ ಸಂಬಂಧ ಸೂಕ್ತ ಕ್ರಮ ಕೈಗೊಳ್ಳಲು ಸಂಬಂಧ ಪಟ್ಟ ಇಲಾಖೆಗೆ ತಿಳಿಸಲು ನೊಡೆಲ್ ಅಧಿಕಾರಿಗಳು ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ನಂ.126 ರವರಿಗೆ ಸೂಚಿಸಲಾಯಿತು.

ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು ಸಂಚಾಲಕರು
ವಾರ್ಡ್ ಸಂಖ್ಯೆ.126

ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ.126

ಪ್ರತಿಯನ್ನು:

1) ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2) ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3) ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4) ಜಂಟಿ ಆಯುಕ್ತರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
5) ಮುಖ್ಯಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
6) ಅಧೀಕ್ಷಕ ಅಭಿಯಂತರರು (ಪಶ್ಚಿಮ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಾರ್ಯಪಾಲಕ ಅಭಿಯಂತರರು (ಗೋವಿಂದರಾಜನಗರ) ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.